# 10ನೇ ಕಾಮನ್ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಹೊರಟ್ಟಿ ಭಾಗಿ



ಬೆಂಗಳೂರು, ಸೆ.19: ಎರಡು ದಿನಗಳ ಕಾಲ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ 10ನೇ ಕಾಮನ್ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನ ಜರುಗಲಿದ್ದು, ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಮ್ಮೇಳನದಲ್ಲಿ ಪಾಲ್ಗೊಳ್ಳಲ್ಲಿದ್ದಾರೆ. ಸಮ್ಮೇಳನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು "ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ ಎಂಬ ವಿಷಯ ಕುರಿತು ವಿಚಾರ ಮಂಡಿಸಲಿದ್ದು, ತಮ್ಮ ನಿರಂತರ 45 ವರ್ಷಗಳ ಸಂಸದೀಯ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಸೆಪ್ಟೆಂಬರ್ 23 ರಂದು ಸಮ್ಮೇಳನವನ್ನು ಉದ್ಘಾಟಿಸಲಿದ್ದು, ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು ಉಪಸಭಾಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಲಿದ್ದಾರೆ ಎಂದು ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್ ಅವರು ತಿಳಿಸಿದ್ದಾರೆ.

ಸಂಯುಕ್ತ ಕರ್ನಾಟಕ
ಕನ್ನಡಿಗರ ಸಾಕ್ಷಿಪ್ರಜ್ಞೆ

# ಕರ್ನಾಟಕದ ಪ್ರತಿನಿಧಿಯಾಗಿ ಹೊರಟ್ಟಿ



ಹುಬ್ಬಳ್ಳಿ: ನವದೆಹಲಿಯಲ್ಲಿ ಸೆ.23 ರಿಂದ ಎರಡು ದಿನಗಳ ಕಾಲ ನಡೆಯಲಿರುವ 10ನೇ ಕಾಮನ್ ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪಾಲ್ಗೊಳ್ಳಲಿದ್ದಾರೆ.

ಎರಡು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ದೇಶದ ಎಲ್ಲ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು, ಉಪ ಸಭಾಧ್ಯಕ್ಷರು, ವಿಧಾನ ಪರಿಷತ್ ಸಭಾಪತಿಗಳು ಹಾಗೂ ಉಪ ಸಭಾಪತಿಗಳು ಭಾಗವಹಿಸಲಿದ್ದಾರೆ. ಲೋಕ ಸಭಾಧ್ಯಕ್ಷ ಓಂ ಬಿರ್ಲಾ ಅವರು ಸಮ್ಮೇಳನ ಉದ್ಘಾಟಿಸಲಿದ್ದಾರೆ. ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು 'ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ' ವಿಷಯ ಕುರಿತು ವಿಚಾರ ಮಂಡಿಸಲಿದ್ದಾರೆ.






ದಿನಾಂಕ: 23-09-2024 ರಿಂದ ಎರಡು ದಿನಗಳ ಕಾಲ ನಡೆಯಲಿರುವ 10ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಾದ ಶ್ರೀ ಬಸವರಾಜ ಎಸ್ ಹೊರಟ್ಟಿರವರು ಪಾಲ್ಗೊಂಡಿದ್ದರು.

ಎರಡು ದಿನಗಳ ಕಾಲ ನಡೆಯುವ ಸಮ್ಮೇಳನದಲ್ಲಿ ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು, ಉಪಸಭಾಧ್ಯಕ್ಷರು, ವಿಧಾನ ಪರಿಷತ್ತ್ ಸಭಾಪತಿಗಳು ಹಾಗೂ ಉಪಸಭಾಪತಿಗಳು ಭಾಗವಹಿಸಿದ್ದರು. ಈ ಸಮ್ಮೇಳನವನ್ನು ಮಾನ್ಯ ಲೋಕ ಸಭಾಧ್ಯಕ್ಷ ಓಂ ಬಿರ್ಲಾ ಅವರು ಉದ್ಘಾಟಿಸಿದರು.